ಕರ್ನಾಟಕ ಸರ್ಕಾರ

ಉದ್ಯೋಗ ಮತ್ತು ತರಬೇತಿ ಇಲಾಖೆ

ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಂಗಳಗಂಗೋತ್ರಿ

## 'ಕರ್ನಾಟಕ ಲೋಕ ಸೇವಾ ಆಯೋಗದ ನೇಮಕಾತಿಗಳ ಪ್ರಕಟಣೆ'

ಆಯೋಗವು ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ)(ಸಾಮಾನ್ಯ) ನಿಯಮಗಳು 2021ರ ನಿಯಮಗಳು ಮತ್ತು ತಿದ್ದುಪಡಿ ನಿಯಮ 2022ರನ್ವಯ ಈ ಕೆಳಕಂಡ ಉಳಿಕೆ ಮೂಲ ವೃಂದ ಗ್ರೂಪ್ ಸಿ' ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ವೆಬ್ಸೈಟ್ ವಿಳಾಸಗಳಾದ https://kpsc.kar.nic.in/ಗಳಲ್ಲಿ ಅಧಿಸೂಚನೆ ಮತ್ತು ಅರ್ಜಿ ನಮೂನೆಗಳನ್ನು ಡೌನ್ಲೋಡ್ ಮಾಡಿಕೊಂಡು ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಆನ್ಲೈನ್‌ಲ್ಲಿ ಸಲ್ಲಿಸಲು **ದಿ: 01.09.2023 ರಿಂದ ದಿ: 30.09.2023** ಕೊನೆಯ ದಿನಾಂಕಗಳಾಗಿರುತ್ತವೆ.

**ಇಲಾಖೆಯ ಹೆಸರು/ ಹುದ್ದೆಯ ಪದನಾಮ**: ವಾಣಿಜ್ಯ ತೆರಿಗೆ ಪರಿವೀಕ್ಷಕರು

**ಹುದ್ದೆಗಳ ಸಂಖ್ಯೆ**: 230

**ವಿದ್ಯಾರ್ಹತೆ**: Should have obtained a degree of a University established by Law in India with Economics or Mathematics as one of the subject, or in Commerce or should possess a qualification declared by the Government to be equivalent to such degree.

**ವಿಶೇಷ ಸೂಚನೆ:** ಇಲಾಖೆಯ ಸ್ಪಷ್ಟೀಕರಣದಂತೆ Economics or Mathematics or Commerceವಿಷಯಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಅಭ್ಯರ್ಥಿಗಳು ಅವರು ಹೊಂದಿರುವ ವಿದಯಾರ್ಹತೆಯಲ್ಲಿ ಕನಿಷ್ಟ ಯಾವುದೇ ಒಂದು ಸೆಮಿಸ್ಟರ್/ ಒಂದು ವರ್ಷದಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಸದರಿ ಪದವಿಗಳನ್ನು ಸಹ ಪರಿಗಣಿಸಲಅಗುವುದು.

**ವಯೋಮಿತಿ:** ಕನಿಷ್ಠ- 18 ವರ್ಷಗಳು

ಗರಿಷ್ಠ- 35 ವರ್ಷಗಳು ಪ್ರ.ವ.-2ಎ, ಪ್ರ.ವ.2ಬಿ ಪ್ರ.ವ 3ಎ, ಪ್ರ.ವ.3ಬಿ – 38 ವರ್ಷಗಳು ಪ.ಜಾ., ಪ.ಪಂ., ಪ್ರ.ವ -1 - 40 ವರ್ಷಗಳು

**ವೇತನ ಶ್ರೇಣಿ**: **ರೂ. 33,450 - 62,600/-**

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: **080-30574957/ 30574901** ಅಥವಾ ಉಪಮುಖ್ಯಸ್ಥರು, ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಮಂಗಳಗಂಗೋತ್ರಿ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

29/8

ಮುಖ್ಯಸ್ಥರು
ವಿಶ್ವವಿದ್ಯಾನಿಲಯ ಉದ್ಯೋಗ ಮಾಹಿತಿ ಮತ್ತು
ಮಾರ್ಗದರ್ಶನ ಕೇಂದ್ರ
ಮಂಗಳೂರು ವಿಶ್ವವಿದ್ಯಾನಿಲಯ
ಮಂಗಳಗಂಗೋತ್ರಿ - 574 199

ಕರ್ನಾಟಕ ಲೋಕಸೇವಾ ಆಯೋಗ, " ಉದ್ಯೋಗ ಸೌಧ ",ಬೆಂಗಳೂರು -560001

ಸಂಖ್ಯೆ: ಪಿಎಸ್ ಸಿ 168 ಆರ್ ಟಿಬಿ(4) /2023-24

ದಿನಾಂಕ:28-08-2023

## ಅಧಿಸೂಚನೆ

1. ಆಯೋಗವು ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ನಿಯಮಗಳು ಹಾಗೂ ತಿದ್ದುಪಡಿ ನಿಯಮ 2022ರನ್ವಯ ಈ ಕೆಳಕಂಡ ಉಳಿಕೆ ಮೂಲ ವೃಂದದ ಗ್ರೂಪ್ 'ಸಿ' ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಇಲಾಖೆಯ ಹೆಸರು | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ | ವೃಂದ |
|---|---|---|---|
| ವಾಣಿಜ್ಯ ತೆರಿಗೆಗಳ ಇಲಾಖೆ | ವಾಣಿಜ್ಯ ತೆರಿಗೆ ಪರಿವೀಕ್ಷಕರು | 230 | ಗ್ರೂಪ್ 'ಸಿ' ಉಳಿಕೆ ಮೂಲ ವೃಂದ |

2. **ಅರ್ಜಿ ಶುಲ್ಕ / ಸ್ವೀಕೃತಿ ಕಾಲಮಿತಿ :**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 01–09–2023 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30–09–2023 |
| ತಾತ್ಕಾಲಿಕ (TENTATIVE) ಪರೀಕ್ಷಾ ದಿನಾಂಕ | ಕನ್ನಡ ಭಾಷಾ ಪರೀಕ್ಷೆ 04–11–2023 |
| | ಸ್ಪರ್ಧಾತ್ಮಕ ಪರೀಕ್ಷೆ 05–11–2023 |

**ವಿಶೇಷ ಸೂಚನೆ :–**

- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
- ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.
- ನಿಯಮಾನುಸಾರ ಆನ್ ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದರಿಂದ ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರ/ಇತರ ಪ್ರಮಾಣ ಪತ್ರಗಳನ್ನು ತಮ್ಮ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. (ದಾಖಲೆಗಳು ಸ್ಪಷ್ಟವಾಗಿರುಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.
- ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

33.450 – 62,600/–